ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ದೇವದುರ್ಗ ರವರ ನ್ಯಾಯಾಲಯ, ದೇವದುರ್ಗ.

**ಸಿ.ಸಿ.ನಂ.730/2024**

ಪಿರ್ಯಾದುದಾರರು : ಕರ್ನಾಟಕ ರಾಜ್ಯ,
ಗಬ್ಬೂರು ಪೊಲೀಸ ಠಾಣೆ,
ಗಬ್ಬೂರು.

– ವಿರುದ್ಧ –

ಆರೋಪಿತರು:
2. ಚಂದ್ರಕಲಾ ಗಂಡ ಬೂದೆಪ್ಪ,
ವಯಸ್ಸು: 29 ವರ್ಷಗಳು, ಉ: ಮನೆ ಕೆಲಸ,
ವಾಸ: ಹದ್ದಿನಾಳ, ತಾ: ದೇವದುರ್ಗ.

**ದೋಷಾರೋಪಣೆ**

ನಾನು ಸುರೇಶ ಅಣ್ಣಪ್ಪ ಸವದಿ, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ದೇವದುರ್ಗ, ಈ ಮೂಲಕ ಆರೋಪಿತರಾದ ನಿಮ್ಮಗಳ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕ 30.05.2024 ರಂದು ಬೆಳಿಗ್ಗೆ 06.00 ಗಂಟೆ ಸಮಯದಲ್ಲಿ ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಗಬ್ಬೂರು ಪೊಲೀಸ ಠಾಣೆ ಹದ್ದಿ ಪೈಕಿ ದೇವದುರ್ಗ ತಾಲ್ಲೂಕು, ಹದ್ದಿನಾಳ ಗ್ರಾಮದಲ್ಲಿ ಸಾಕ್ಷಿ-1 ರವರು ತಮ್ಮ ಮನೆಯ ಮುಂದೆ ಇದ್ದಾಗ 2 ನೇ ಆರೋಪಿತರಾದ ನೀವು 1 ನೇ ಆರೋಪಿಯೊಂದಿಗೆ ಸೇರಿ ಆಸ್ತಿ ಭಾಗದ ವಿಚಾರವಾಗಿ ಸಾಕ್ಷಿ-1 ರವರೊಂದಿಗೆ ಜಗಳ ತೆಗೆದು ಕಟ್ಟಿಗೆಯಿಂದ ಕೈಕಾಲುಗಳಿಗೆ ಹೊಡೆದು ಗಾಯ ಮಾಡಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ.324 ಸಹವಾಚಕ ಕಲಂ.34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಆಸ್ತಿ ಭಾಗದ ವಿಚಾರವಾಗಿ ಸಾಕ್ಷಿ-1 ರವರೊಂದಿಗೆ ಜಗಳ ತೆಗೆದು ಕಟ್ಟಿಗೆಯಿಂದ ಕೈಕಾಲುಗಳಿಗೆ ಹೊಡೆದು ಘೋರ ಸ್ವರೂಪದ ಗಾಯ ಮಾಡಿ ಆ ಮೂಲಕ ಭಾರತ ದಂಡ ಸಂಹಿತೆ ಕಲಂ.325 ಸಹವಾಚಕ ಕಲಂ 34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಆಸ್ತಿ ಭಾಗದ ವಿಚಾರವಾಗಿ ಸಾಕ್ಷಿ-1 ರವರೊಂದಿಗೆ ಎಲೆ ಲಂಗಾ ಸೂಳೆ ಮಗನೆ ಅಂತಾ ಅವಾಚ್ಯವಾಗಿ ಬೈದು ಆ ಮೂಲಕ ಭಾರತ ದಂಡ ಸಂಹಿತೆ ಕಲಂ.504 ಸಹವಾಚಕ ಕಲಂ 34 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರೀ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರಿ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ದೋಷಾರೋಪಣೆಯನ್ನು ಈ ದಿನ ದಿನಾಂಕಃ 04.10.2025 ರಂದು ಆರೋಪಿತರಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆತನ ಉತ್ತರವನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ದೇವದುರ್ಗ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ದೇವದುರ್ಗ ರವರ ನ್ಯಾಯಾಲಯ, ದೇವದುರ್ಗ.

**ಸಿ.ಸಿ.ನಂ.730/2024**

ಪಿರ್ಯಾದುದಾರರು : ಕರ್ನಾಟಕ ರಾಜ್ಯ,
ಗಬ್ಬೂರು ಪೊಲೀಸ ಠಾಣೆ,
ಗಬ್ಬೂರು.

– ವಿರುದ್ಧ –

ಆರೋಪಿತರುಃ 2. ಚಂದ್ರಕಲಾ ಗಂಡ ಬೂದೆಪ್ಪ,

**:: ಆಪಾದನೆ ::**

1. ನಿಮಗೆ ಓದಿ ಹೇಳಿದ ಆಪಾದನೆ ಅರ್ಥವಾಯಿತಾ?

ಉತ್ತರಃ-

2. ನೀವು ತಪ್ಪು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕಾ?

ಉತ್ತರಃ-

ಮೇಲಿನ ಹೇಳಿಕೆಯನ್ನು ಆಪಾದಿತರಿಗೆ ತಿಳಿಯುವಂತೆ ಆತನ ಭಾಷೆಯಲ್ಲಿ ಓದಿ, ಹೇಳಿ ತಿಳಿಸಿ ಅವರ ಹೇಳಿಕೆ ಪಡೆದುದಾಗಿ ದೃಢೀಕರಿಸಿರುತ್ತೇನೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ದೇವದುರ್ಗ.

ಆರೋಪಿತರ ಸಹಿ